## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **926**
ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : **13.12.2023**
ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು

| ಪ್ರಶ್ನೆ | ಉತ್ತರ |
|---|---|
| **(ಅ)** ಬರಗಾಲದಿಂದ ರಾಜ್ಯದಲ್ಲಿ ಉತ್ತರ ಕರ್ನಾಟಕದ ರೈತ ಬಾಂಧವರಿಗೆ ಅಪಾರ ನಷ್ಟ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಉತ್ತರ ಕರ್ನಾಟಕದ ನಾಗರೀಕರಿಗೆ/ ರೈತರಿಗೆ ಆಗಿರುವ ನಷ್ಟವೆಷ್ಟು; ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಸಮಗ್ರ ವಿವರಗಳನ್ನು ನೀಡುವುದು; | ಸರ್ಕಾರದ ಗಮನಕ್ಕೆ ಬಂದಿದೆ<br><br>ಉತ್ತರ ಕರ್ನಾಟಕದ 13 ಜಿಲ್ಲೆಗಳಲ್ಲಿ 34.68 ಲಕ್ಷ ಹೆಕ್ಟೇರ್ ಬೆಳೆ ಹಾನಿಯಾಗಿದ್ದು, SDRF ಮಾರ್ಗಸೂಚಿಯನ್ವಯ ಇನ್‌ಪುಟ್ ಸಬಿಡಿ ಪಾವತಿಸಲು ರೂ.3494.54 ಕೋಟಿ ಅಗತ್ಯವಿದೆ. ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ರಾಜ್ಯದಲ್ಲಿ 46.11 ಲಕ್ಷ ಹೆಕ್ಟೇರ್ ಕೃಷಿ ಹಾಗೂ 2.06 ಲಕ್ಷ ಹೆಕ್ಟೇರ್ ತೋಟಗಾರಿಕೆ ಸೇರಿದಂತೆ ಒಟ್ಟು 48.17 ಲಕ್ಷ ಹೆಕ್ಟೇರ್ ಬೆಳೆ ಹಾನಿಯಾಗಿದ್ದು, ಬೆಳೆ ಹಾನಿ ಇನ್‌ಪುಟ್ ಸಬಿಡಿಗೆ NDRF ಅಡಿಯಲ್ಲಿ ರೂ.4663.12ಕೋಟಿಗಳ ಆರ್ಥಿಕ ನೆರವು ಕೋರಿ ಕೇಂದ್ರ ಸರ್ಕಾರಕ್ಕೆ ಮೆಮೋರಾಂಡಂ ಸಲ್ಲಿಸಲಾಗಿದೆ.<br>ಬರ-ಪರಿಸ್ಥಿತಿಯ ಹಿನ್ನಲೆಯಲ್ಲಿ ಕೇಂದ್ರ ಸರ್ಕಾರದಿಂದ N D R F ಅನುದಾನವನ್ನು ನಿರೀಕ್ಷಿಸಿ SDRF/NDRF ಮಾರ್ಗಸೂಚಿಗಳ ಪ್ರಕಾರ ಬೆಳೆ ಹಾನಿ ಪರಿಹಾರದ ಮೊದಲನೇ ಕಂತಾಗಿ / ಬೆಳೆ ಹಾನಿ ಪರಿಹಾರವಾಗಿ ಅರ್ಹತೆಯ ಅನುಗುಣವಾಗಿ ರೂ.2,000/- ರವರೆಗೆ ರೈತರಿಗೆ ಪಾವತಿಸಲು ತೀರ್ಮಾನಿಸಲಾಗಿದೆ<br>ಬರ ನಿರ್ವಹಣೆಗಾಗಿ ಕೈಗೊಂಡ ಕ್ರಮದ ವಿವರವನ್ನು **ಅನುಬಂಧ** ದಲ್ಲಿ ಒದಗಿಸಲಾಗಿದೆ. |
| **(ಆ)** ಉತ್ತರ ಕರ್ನಾಟಕದ ಎಷ್ಟು ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ; ಬರಗಾಲ ಪರಿಸ್ಥಿತಿ ನಿರ್ವಹಣೆಗೆ ಸರ್ಕಾರ ಯಾವುದಾದರೂ ವಿಶೇಷ ಯೋಜನೆಯನ್ನು ರೂಪಿಸಿದೆಯೇ; | ಕೇಂದ್ರ ಸರ್ಕಾರದ ಕೃಷಿ ಮಂತ್ರಾಲಯ ಬರ ನಿರ್ವಹಣೆ ಕೈಪಿಡಿ 2020ರನ್ವಯ ವಿವಿಧ ಅವಧಿಯ ಹವಮಾನ ಪರಿಸಿತಿ ಅನುಗುಣವಾಗಿ ಉತ್ತರ ಕರ್ನಾಟಕದ ವಿಜಯಪುರ, ರಾಯಚೂರು, ಬೀದರ್, ಬೆಳಗಾವಿ, ಯಾದಗಿರಿ, ಕೊಪ್ಪಳ, ಧಾರವಾಡ, ಕಲಬುರ್ಗಿ, ಹಾವೇರಿ, ಬಾಗಲಕೋಟೆ, ವಿಜಯನಗರ, ಗದಗ ಹಾಗೂ ಬಳ್ಳಾರಿ ಜಿಲ್ಲೆಗಳ ಎಲ್ಲಾ 110 ತಾಲ್ಲೂಕುಗಳನ್ನು ಬರ ಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ.<br>ರಾಜ್ಯದಲ್ಲಿನ ಬರ ಪರಿಸಿತಿ ಉಪ ಶಮನಗೊಳಿಸಲು ರಾಜ್ಯ ವಿಪತ್ತು ಉಪಶಮನ ನಿಧಿ (SDMF) ರಡಿ ಕೃಷಿ ಭಾಗ್ಯ ಯೋಜನೆಯ ಅನುಷ್ಠಾನಕ್ಕಾಗಿ ಕೃಷಿ ಇಲಾಖೆಗೆ ರೂ.100.00 ಕೋಟಿಗಳನ್ನು ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಕಡತ ಸಂಖ್ಯೆ: ಕಂಇ 582 ಟಿಎನ್‌ಆರ್ 2023

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು

ಚು.ಪ. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 926 ಕ್ಕೆ

ಅನುಬಂಧ

## 2023ರ ಮುಂಗಾರು ಬರ ನಿರ್ವಹಣೆಗಾಗಿ ಸರ್ಕಾರದಿಂದ ಕೈಗೊಂಡ ಕ್ರಮಗಳು

1) 2023 ರ ಮುಂಗಾರಿನಲ್ಲಿ (ಜೂನ್ ರಿಂದ ಸೆಪ್ಟೆಂಬರ್ ವರೆಗೆ) ಶೇ. 25 ರಷ್ಟು ಮಳೆಕೊರತೆ ಕಂಡು ಬಂದಿದೆ. ಕೇಂದ್ರ ಸರ್ಕಾರದ ಬರ ಕೈಪಿಡಿ-2020 ರಲ್ಲಿ ಬರ ಪರಿಸ್ಥಿತಿ ಘೋಷಿಸಲು ಅನುಸರಿಸಬೇಕಾದ ಮಾನದಂಡಗಳನ್ನು ಹಂತ-1 ರಲ್ಲಿ ಕಡ್ಡಾಯ ಮಾನದಂಡಗಳಾದ ಮಳೆ ಕೊರತೆ (ಶೇ.60ಕ್ಕಿಂತ ಹೆಚ್ಚು) ಅಥವಾ ಸತತ ಮೂರು ವಾರಗಳ ಅಥವಾ ಅದಕ್ಕಿಂತ ಹೆಚ್ಚು ಶುಷ್ಕ ವಾತಾವರಣ (Dry Spell) ಕಂಡು ಬಂದಿರಬೇಕು. ಹಂತ-2 ರಲ್ಲಿ ತತ್ಪರಿಣಾಮ ಮಾನದಂಡಗಳಾದ ಕೃಷಿ ಬಿತ್ತನೆ ಪ್ರದೇಶ, ಉಪಗ್ರಹ ಆಧಾರಿತ ಬೆಳೆ ಆರೋಗ್ಯ ಸೂಚ್ಯಂಕ (NDVI/ NDWI-Dev (%) and VIC (%)) ತೇವಾಂಶ ಕೊರತೆ (MAI) ಹಾಗೂ ನದಿಗಳಲ್ಲಿನ ಹರಿವು, ಜಲಾಶಯಗಳ ನೀರಿನ ಸಂಗ್ರಹಣೆ ಹಾಗೂ ಅಂತರ್ಜಲ ಮಟ್ಟ ಸೂಚ್ಯಂಕಗಳಲ್ಲಿನ ತೀವ್ರತೆಯನ್ನು ಪರಿಶೀಲಿಸಿ ಬರಕ್ಕೆ ತುತ್ತಾಗಿರುವ ತಾಲ್ಲೂಕುಗಳನ್ನು ಗುರುತಿಸಿ, ಬೆಳೆ ಸಮೀಕ್ಷೆ ದೃಢೀಕರಣ (Ground Truthing) ವರದಿ ಜಿಲ್ಲಾಧಿಕಾರಿಗಳಿಂದ ಪಡೆದು, ಬರ ವರ್ಗೀಕರಣ (ಸಾಧಾರಣ & ತೀವ್ರ) ಮಾಡಲಾಗಿದೆ.

2) ಮಾನ್ಯ ಮುಖ್ಯಮಂತ್ರಿಗಳು ಮತ್ತು ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ (KSDMA) ಅಧ್ಯಕ್ಷರು ಜೂನ್ 1 ರಿಂದ ಇಲ್ಲಿಯವರೆಗೆ ಮೂರು ಬಾರಿ ರಾಜ್ಯದಲ್ಲಿನ ಬರ ಪರಿಸ್ಥಿತಿ ಹಾಗೂ ಕೈಗೊಂಡ ಕ್ರಮಗಳ ಕುರಿತು ಸಭೆ ನಡೆಸಿ ಪರಿಶೀಲಿಸಿದ್ದಾರೆ.

3) ಮಾನ್ಯ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ರಾಜ್ಯದಲ್ಲಿ ಬರ, ಪ್ರವಾಹ ಮತ್ತು ಇತರೆ ನೈಸರ್ಗಿಕ ವಿಕೋಪಗಳಿಂದುದ್ಭವಿಸಬಹುದಾದ ಪರಿಸ್ಥಿತಿಯನ್ನು ಪರಾಮರ್ಶಿಸಲು ಮತ್ತು ಇದನ್ನು ಸಮರ್ಥವಾಗಿ ನಿಭಾಯಿಸಲು ಹಾಗೂ ಅಗತ್ಯ ನಿರ್ದೇಶನಗಳನ್ನು ನೀಡಲು ಸಚಿವ ಸಂಪುಟ ಉಪಸಮಿತಿಯನ್ನು ರಚಿಸಲಾಗಿದೆ. ಜೂನ್ 1 ರಿಂದ ಇಲ್ಲಿಯವರೆಗೆ 10 ಬಾರಿ ಸಭೆ ನಡೆಸಿ ರಾಜ್ಯದಲ್ಲಿನ ಬರ ಪರಿಸ್ಥಿತಿ ಪರಿಶೀಲಿಸಿ ನಿರ್ವಹಣೆಗೆ ಅಗತ್ಯ ಸಲಹೆ ಹಾಗೂ ಕ್ರಮಗಳ ಕುರಿತು ತೀರ್ಮಾನಿಸಿದೆ.

4) ಮಾನ್ಯ ಕಂದಾಯ ಸಚಿವರು 4 ಕಂದಾಯ ವಿಭಾಗಗಳಲ್ಲಿ ಬರ ಪರಿಸ್ಥಿತಿಯ ಪರಿಶೀಲನಾ ಸಭೆಗಳನ್ನು ನಡೆಸಿ ಅಗತ್ಯ ಕ್ರಮಗಳು ತೆಗೆದುಕೊಂಡಿರುವ ಬಗ್ಗೆ ಪರಿಶೀಲಿಸಿ ಸೂಚನೆಗಳನ್ನು ನೀಡಿರುತ್ತಾರೆ ಹಾಗೂ ರಾಜ್ಯದ 22 ಜಿಲ್ಲೆಗಳಿಗೆ ಭೇಟಿ ನೀಡಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಬರ ಪರಿಸ್ಥಿತಿಯ ಪರಿಶೀಲನಾ ಸಭೆಗಳನ್ನು ನಡೆಸಿರುತ್ತಾರೆ. ಇದಲ್ಲದೇ, 3 ಬಾರಿ ಎಲ್ಲಾ ಜಿಲ್ಲಾಧಿಕಾರಿಗಳೊಡನೆ ಸಭೆ ನಡೆಸಿರುತ್ತಾರೆ.

5) ರಾಜ್ಯ ಮಟ್ಟದ ಹವಾಮಾನ ಕಣ್ಗಾವಲು ಸಮಿತಿಯು ವಾರಕ್ಕೊಮ್ಮೆ ಹವಾಮಾನ, ಜಲಾಶಯಗಳ ನೀರಿನ ಸಂಗ್ರಹಣಾ, ಸಣ್ಣ ನೀರಾವರಿ ಕೆರೆಗಳಲ್ಲಿನ ನೀರಿನ ಸಂಗ್ರಹಣಾ, ಅಂತರ್ಜಲ ಮಟ್ಟ ಕುರಿತು ಪರಿಶೀಲಿಸುತ್ತದೆ ಹಾಗೂ ವಿವಿಧ ಬರ ನಿರ್ವಹಣೆ ಕಾರ್ಯಚಟುವಟಿಕೆಗಳ ಪ್ರಗತಿ ಕುರಿತು ಮಾಹಿತಿ ಪಡೆದು ಬರ ನಿರ್ವಹಣೆಗೆ ಬೇಕಾದ ಸಲಹಾ ಸೂಚನೆಗಳನ್ನು ನೀಡಲಾಗುತ್ತಿದೆ.

6) ಕೇಂದ್ರ ಸರ್ಕಾರದ ಕೃಷಿ ಮಂತ್ರಾಲಯದ ಬರ ನಿರ್ವಹಣೆ ಕೈಪಿಡಿ 2020 ರನ್ವಯ ಜೂನ್ 1 ರಿಂದ ಆಗಸ್ಟ್ 19 ರ ವರೆಗಿನ ಅವಧಿಗೆ ಎಲ್ಲಾ ಮಾನದಂಡಗಳನ್ನು ವಿಶ್ಲೇಷಿಸಿ 195 ತಾಲ್ಲೂಕುಗಳನ್ನು ಬರ ಪರಿಸ್ಥಿತಿ ಕಂಡುಬಂದಿರುವ ತಾಲ್ಲೂಕುಗಳೆಂದು ಗುರುತಿಸಿ ಈ ತಾಲ್ಲೂಕುಗಳಲ್ಲಿ ಬೆಳೆ ಸಮೀಕ್ಷೆ ದೃಢೀಕರಣ (GT) ಕೈಗೊಂಡು 195 ತಾಲ್ಲೂಕುಗಳನ್ನು ದಿನಾಂಕ:13-9-2023ರಂದು ಬರ ಪೀಡಿತ ತಾಲ್ಲೂಕುಗಳೆಂದು ಘೋಷಿಸಿ, ದಿನಾಂಕ:22-9-2023ರಂದು ರೂ.4860.13 ಕೋಟಿಗಳನ್ನು NDRF ರಡಿ ಆರ್ಥಿಕ ನೆರವು ಕೋರಿ ಕೇಂದ್ರ ಸರ್ಕಾರಕ್ಕೆ ಮೆಮೊರಾಂಡಮ್ ಸಲ್ಲಿಸಲಾಯಿತು.

7) ಜೂನ್ ರಿಂದ ಸೆಪ್ಟೆಂಬರ್ ಅಂತ್ಯದ ಅವಧಿಗೆ ಎಲ್ಲಾ ಮಾನದಂಡಗಳನ್ನು ವಿಶ್ಲೇಷಿಸಿ 21 ತಾಲ್ಲೂಕುಗಳನ್ನು ಬರ ಪರಿಸ್ಥಿತಿ ಕಂಡುಬಂದಿರುವ ತಾಲ್ಲೂಕುಗಳೆಂದು ಗುರುತಿಸಿ ಈ ತಾಲ್ಲೂಕುಗಳಲ್ಲಿ ಬೆಳೆ ಸಮೀಕ್ಷೆ ದೃಢೀಕರಣ (GT) ಕೈಗೊಂಡು 21 ತಾಲ್ಲೂಕುಗಳನ್ನು ದಿನಾಂಕ:12-10-2023ರಂದು ಬರ ಪೀಡಿತ ತಾಲ್ಲೂಕುಗಳೆಂದು ಘೋಷಿಸಿ, ಮೊದಲನೇ ಮೆಮೊರಾಂಡಮ್‌ರಲ್ಲಿ ಕೋರಲಾದ ರೂ.4860.13 ಕೋಟಿಗಳ ಮೊತ್ತದ ಜೊತೆಗೆ ರೂ.463.74 ಕೋಟಿ ಹಾಗೂ Gratuitous Relief ರೂ.12,577.86 ಕೋಟಿ

ಸೇರಿ ಒಟ್ಟು ರೂ.17,901.73 ಕೋಟಿಗಳ ಆರ್ಥಿಕ ನೆರವು ಕೋರಿ ದಿನಾಂಕ:20-10-2023ರಂದು NDRF ರಡಿ ಆರ್ಥಿಕ ನೆರವು ಕೋರಿ ಕೇಂದ್ರ ಸರ್ಕಾರಕ್ಕೆ ಮೆಮೊರಾಂಡಮ್ ಸಲ್ಲಿಸಲಾಯಿತು.

8) ಜೂನ್ ರಿಂದ ಅಕ್ಟೋಬರ್ ಅಂತ್ಯದ ವರೆಗಿನ ಹವಾಮಾನ ಪರಿಸ್ಥಿತಿ ಅನುಗುಣವಾಗಿ 7 ತಾಲ್ಲೂಕುಗಳನ್ನು ಬರ ಪರಿಸ್ಥಿತಿ ಕಂಡುಬಂದಿರುವ ತಾಲ್ಲೂಕುಗಳೆಂದು ಗುರುತಿಸಿ, ಬೆಳೆ ಸಮೀಕ್ಷೆ ದೃಢೀಕರಣ (GT) ಕೈಗೊಂಡು 7 ತಾಲ್ಲೂಕುಗಳನ್ನು ದಿನಾಂಕ:04-11-2023ರಂದು ಬರ ಪೀಡಿತ ತಾಲ್ಲೂಕುಗಳೆಂದು ಘೋಷಿಸಿ, ಮೆಮೊರಾಂಡಮ್‌ರಲ್ಲಿ ಈಗಾಗಲೇ ಕೋರಲಾದ ರೂ.17,901.73 ಕೋಟಿಗಳ ಮೊತ್ತದ ಜೊತೆಗೆ ರೂ.269.71 ಕೋಟಿ ಸೇರಿ ಒಟ್ಟು ರೂ.18,171.44 ಕೋಟಿಗಳ ಆರ್ಥಿಕ ನೆರವು ಕೋರಿ ದಿನಾಂಕ:16-11-2023ರಂದು NDRF ರಡಿ ಆರ್ಥಿಕ ನೆರವು ಕೋರಿ ಕೇಂದ್ರ ಸರ್ಕಾರಕ್ಕೆ ಹೆಚ್ಚುವರಿ ಮೆಮೊರಾಂಡಮ್ ಸಲ್ಲಿಸಲಾಯಿತು.

9) ಕೇಂದ್ರ ಸರ್ಕಾರದ ಕೃಷಿ ಮಂತ್ರಾಲಯದ ಬರ ನಿರ್ವಹಣೆ ಕೈಪಿಡಿ 2020 ರನ್ವಯ 1 ನೇ ಹಂತದ Mandatory Indicators ಹಾಗೂ 2 ನೇ ಹಂತದ Impact Indicators ರಲ್ಲಿ ಅರ್ಹತೆ ಪಡೆದ ನಂತರ 3 ನೇ ಹಂತದಲ್ಲಿ ಜಿಲ್ಲಾಧಿಕಾರಿಗಳ ಮೇಲ್ವಿಚಾರಣೆಯಲ್ಲಿ ಎಲ್ಲಾ ಜಿಲ್ಲೆಗಳ 2980 ಗ್ರಾಮಗಳಲ್ಲಿ 22,165 ಪ್ಲಾಟ್ ಗಳಲ್ಲಿ ಬೆಳೆ ಪರಿಸ್ಥಿತಿ ದೃಢೀಕರಣ (Ground Truthing) ನಡೆಸಲಾಗಿದೆ. ಇದರ ಅನುಸಾರ ಬರ-ವರ್ಗೀಕರಣ ನಿರ್ಧರಿಸಲಾಗಿದೆ.

10) ಕೇಂದ್ರ ಸರ್ಕಾರವು ರಾಜ್ಯದಿಂದ ಸಲ್ಲಿಸಲಾಗಿದ್ದ Memorandum ಪರಿಗಣಿಸಿ ಕೇಂದ್ರದ ಕೃಷಿ ಮಂತ್ರಾಲಯ, Inter Ministerial Central Team (IMCT) ರಚಿಸಿತು. ಕೃಷಿ ಮಂತ್ರಾಲಯದಿಂದ ಜಂಟಿ ಕಾರ್ಯದರ್ಶಿ ರವರ ನೇತೃತ್ವದಲ್ಲಿ 10 ಜನರ IMCT ತಂಡ ರಾಜ್ಯದ 13 ಜಿಲ್ಲೆಗಳಿಗೆ ದಿನಾಂಕ: 4 ರಿಂದ 09 ನೇ ಅಕ್ಟೋಬರ್ ವರೆಗೆ ಭೇಟಿ ನೀಡಿ ಬರ ಪರಿಸ್ಥಿತಿ ಪರಿವೀಕ್ಷಣೆ ನಡೆಸಿತು. ಕೇಂದ್ರ ತಂಡಕ್ಕೆ ಮಾನ್ಯ ಮುಖ್ಯ ಮಂತ್ರಿಗಳು ಹಾಗೂ ಸಚಿವ ಸಂಪುಟ ಉಪಸಮಿತಿ ಅಧ್ಯಕ್ಷರು ಮತ್ತು ಸದಸ್ಯರು ರಾಜ್ಯದಲ್ಲಿನ ಬರ ಪರಿಸ್ಥಿತಿ ಕುರಿತು ಮನವರಿಕೆ ಮಾಡಿ NDRF ಅಡಿಯಲ್ಲಿ ಕೋರಿರುವ ಆರ್ಥಿಕ ನೆರವನ್ನು ಶೀಘ್ರದಲ್ಲಿ ಬಿಡುಗಡೆ ಮಾಡುವಂತೆ ಸೂಚಿಸಿದರು.

11) ಕೇಂದ್ರ ಸರ್ಕಾರದ ಕೃಷಿ ಮಂತ್ರಾಲಯ ಬರ ನಿರ್ವಹಣೆ ಕೈಪಿಡಿ 2020ರನ್ವಯ ವಿವಿಧ ಅವಧಿಯ ಹವಮಾನ ಪರಿಸ್ಥಿತಿ ಅನುಗುಣವಾಗಿ ಒಟ್ಟಾರೆ ರಾಜ್ಯದ 236 ತಾಲ್ಲೂಕುಗಳ ಪೈಕಿ 223 ತಾಲ್ಲೂಕುಗಳನ್ನು (196 ತೀವ್ರ ಬರ & 27 ಸಾಧರಣ ಬರ) ಬರ ಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ.

12) ಮುಂದಿನ ದಿನಗಳಲ್ಲಿ ಕುಡಿಯುವ ನೀರು ಪೂರೈಕೆ, ಗೋಶಾಲೆ & ಮೇವಿನ ಬ್ಯಾಂಕ್ ನಿರ್ವಹಣೆ ಇತರೆ ತುರ್ತು ಬರ ನಿರ್ವಹಣೆ ಕಾರ್ಯಗಳನ್ನು ಕೈಗೆತ್ತಿಕೊಳ್ಳಲು 31 ಜಿಲ್ಲೆಗಳಿಗೆ ರೂ.324 ಕೋಟಿ ಗಳನ್ನು ದಿನಾಂಕ:31-10-2023ರಂದು ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ ಇದನ್ನು ಒಳಗೊಂಡಂತೆ ದಿನಾಂಕ:27-11-2023 ರನ್ವಯ ಜಿಲ್ಲಾಧಿಕಾರಿಗಳ ಪಿಡಿ ಖಾತೆಯಲ್ಲಿ ಒಟ್ಟು ರೂ.775.83ಕೋಟಿ ಹಾಗೂ ತಹಶೀಲ್ದಾರ್ ಪಿಡಿ ಖಾತೆಯಲ್ಲಿ ರೂ.119.28 ಕೋಟಿ ಅನುದಾನ ಲಭ್ಯವಿದ್ದು ತುರ್ತು ಬರ ನಿರ್ವಹಣೆಗೆ ಅನುದಾನದ ಕೊರತೆ ಇರುವುದಿಲ್ಲ.

13) ಮುಂದಿನ ದಿನಗಳಲ್ಲಿ ಮೇವಿನ ಕೊರತೆ ಉಂಟಾಗದಂತೆ ಇಲಾಖೆಯ ಯೋಜನೆಗಳ ಮೂಲಕ ರೈತರಿಗೆ ಮೇವಿನ ಬೀಜ ವಿತರಿಸಿ, ಮೇವು ಬೆಳೆಸಲು, ಪ್ರೋತ್ಸಾಹಿಸಲು ಕ್ರಮ ಕೈಗೊಳ್ಳಲಾಗಿದೆ. SDRF ಅಡಿಯಲ್ಲಿ ಮೇವಿನ ಕಿರುಪೊಟ್ಟಣಗಳನ್ನು ನಿಯಮಾನುಸಾರ ಖರೀದಿಸಲು ರೂ.20.00 ಕೋಟಿ ಗಳನ್ನು ಪಶು ಸಂಗೋಪನ ಇಲಾಖೆಗೆ ಬಿಡುಗಡೆಗೊಳಿಸಲಾಗಿದೆ.

14) ತಾಲ್ಲೂಕು ಮಟ್ಟದಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳ ಮೇವು ನಿರ್ವಹಣೆಗೆ ಹಾಗೂ ಬರ ಪರಿಹಾರ ಕ್ರಮಗಳ ಮೇಲ್ವಿಚಾರಣೆಗಾಗಿ ಶಾಸಕರ ನೇತೃತ್ವದಲ್ಲಿ ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ರಚಿಸಲಾಗಿದೆ. ಸದರಿ ಕಾರ್ಯ ಪಡೆಯು ಕಾಲಕಾಲಕ್ಕೆ ಸಭೆಗಳನ್ನು ನಡೆಸಿ ಬರ ನಿರ್ವಹಣೆಯ ಪರಿಸ್ಥಿತಿಯನ್ನು ಪರಿಶೀಲಿಸಲು ಸೂಚನೆ ನೀಡಲಾಗಿದೆ.

15) ಬರ ಪೀಡಿತ ಪ್ರದೇಶಗಳಲ್ಲಿ ಕುಡಿಯುವ ನೀರು ಸರಬರಾಜು ಹಾಗೂ ಮೇವು ಸರಬರಾಜು ಪ್ರಕ್ರಿಯೆಗೆ KTPP ಕಾಯ್ದೆಯಡಿ ಟೆಂಡರ್ ಪ್ರಕ್ರಿಯೆಗಳನ್ನು ಕೈಗೊಳ್ಳಲು ಕ್ರಮ ವಹಿಸಲಾಗಿದೆ.

ವಿ.ಪ. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 726

17) ಟ್ಯಾಂಕರ್ ಮೂಲಕ ಹಾಗೂ ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಆಧಾರದ ಮೇಲೆ ಪಡೆದು ತುರ್ತು ಕುಡಿಯುವ ನೀರು ಪೂರೈಕೆಗೆ ಹಾಗೂ ಜಾನುವಾರು ಸಂರಕ್ಷಣೆಗಾಗಿ ಗೋಶಾಲೆ ಹಾಗೂ ಮೇವಿನ ಬ್ಯಾಂಕ್‌ಗಳನ್ನು ಅಗತ್ಯತೆಯ ಅನುಗುಣವಾಗಿ ತೆರೆಯಲು ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ ಇದಕ್ಕೆ ಸಂಬಂಧಿಸಿದಂತೆ 15 ದಿನದೊಳಗೆ ಬಿಲ್ಲು ಪಾವತಿ ಮಾಡಲು ಕ್ರಮ ವಹಿಸಲು ಸೂಚಿಸಲಾಗಿದೆ.

18) ಮುಂದಿನ ದಿನಗಳಲ್ಲಿ ಜಾನುವಾರುಗಳಿಗೆ ಅಗತ್ಯವಿರುವ ಮೇವಿನ ಕೊರತೆ ನೀಗಿಸಲು ರಾಜ್ಯದಲ್ಲಿ ರೈತರ ಬಳಿ ಇರುವ ಮೇವು ಇತರ ರಾಜ್ಯಗಳಿಗೆ ಮಾರಾಟವಾಗದಂತೆ / ಸಾಗಣಿಕೆ ಮಾಡದಂತೆ ನಿರ್ಬಂಧಿಸಲು ಆದೇಶ ಹೊರಡಿಸಲಾಗಿದೆ.

19) ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಜಿಲ್ಲಾಧಿಕಾರಿಗಳು ಕಾಲಕಾಲಕ್ಕೆ ಬರ ನಿರ್ವಹಣೆಯ ಕುರಿತು ಸಭೆಗಳನ್ನು ನಡೆಸಿ ವಾಸ್ತವಿಕ ಪರಿಸ್ಥಿತಿಯ ಪರಿಶೀಲನೆಗಾಗಿ ಸಭೆ ನಡೆಸಲು ಸೂಚಿಸಲಾಗಿದೆ.

20) ರಾಜ್ಯದಲ್ಲಿನ ಬರ ಪರಿಸ್ಥಿತಿ ಉಪ ಶಮನಗೊಳಿಸಲು ರಾಜ್ಯ ವಿಪತ್ತು ಉಪಶಮನ ನಿಧಿ (SDMF) ರಡಿ ಕೃಷಿ ಭಾಗ್ಯ ಯೋಜನೆಯ ಅನುಷ್ಠಾನಕ್ಕಾಗಿ ಕೃಷಿ ಇಲಾಖೆಗೆ ರೂ.100.00 ಕೋಟಿಗಳನ್ನು ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗಿದೆ.

22) ರಾಜ್ಯದಲ್ಲಿ ಬರ-ಪರಿಸ್ಥಿತಿ ಇರುವುದರಿಂದ RBI ನಿರ್ದೇಶನದಂತೆ ರೈತರ ಬೆಳೆ ಸಾಲದ ಮರುಪಾವತಿ ಅವಧಿಯನ್ನು ಅಲ್ಪಾವಧಿಯಿಂದ ಮಧ್ಯಾವಧಿ / ದೀರ್ಘಾವಧಿಗೆ Re-structure ಮಾಡಲು SLBC ಗೆ ಸೂಚಿಸಲಾಗಿದೆ.

23) ಬರ-ಪರಿಸ್ಥಿತಿಯ ಹಿನ್ನಲೆಯಲ್ಲಿ ಕೇಂದ್ರ ಸರ್ಕಾರದಿಂದ NDRF ಅನುದಾನವನ್ನು ನಿರೀಕ್ಷಿಸಿ SDRF/NDRF ಮಾರ್ಗಸೂಚಿಗಳ ಪ್ರಕಾರ ಬೆಳೆ ಹಾನಿ ಪರಿಹಾರದ ಮೊದಲನೇ ಕಂತಾಗಿ / ಬೆಳೆ ಹಾನಿ ಪರಿಹಾರವಾಗಿ ಅರ್ಹತೆಯ ಅನುಗುಣವಾಗಿ ರೂ.2,000/- ರವರೆಗೆ ರೈತರಿಗೆ ಪಾವತಿಲು ತೀರ್ಮಾನಿಸಲಾಗಿದೆ.

****